# ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ

ನಂ.4, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560 018

**ಕ್ರಮ ಸಂಖ್ಯೆ: ಕರಾಸಗ್ರಾಮ/ಆಡಳಿತ/ನೇ.ನೇ/01/2025-26** **ದಿನಾಂಕ : 30/01/2026**

## : ನೇಮಕಾತಿ ಪ್ರಕಟಣೆ :

ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ (ನಿ)., ಬೆಂಗಳೂರು ಈ ಸಂಸ್ಥೆಯಲ್ಲಿ ಖಾಲಿ ಇರುವ 34 ಹುದ್ದೆಗಳ ನೇರ ನೇಮಕಾತಿಗಾಗಿ ದಿನಾಂಕ: 09.01.2026 ರಂದು ನೇಮಕಾತಿ ಪ್ರಕಟಣೆ ಹೊರಡಿಸಿ, ಸರ್ಕಾರದ ಆದೇಶದನ್ವಯ 03 (ಮೂರು) ವರ್ಷಗಳ ವಯೋಮಿತಿ ಸಡಿಲಿಕೆ ನೀಡಲಾಗಿತ್ತು.

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ : **ಸಿಆಸುಇ 262 ಸೇನೆನಿ 2025 ಬೆಂಗಳೂರು, ದಿನಾಂಕ : 29.01.2026**ರನ್ವಯ ಅರ್ಜಿ ಸಲ್ಲಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ 03 (ಮೂರು) ವರ್ಷಗಳ ವಯೋಮಿತಿ ಸಡಿಲಿಕೆ ನೀಡುವ ಬದಲಿಗೆ 05 (ಐದು) ವರ್ಷಗಳ ವಯೋಮಿತಿ ಸಡಿಲಿಕೆ ನೀಡಲಾಗಿದೆ.

**ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 07.02.2026 ರಿಂದ 15.02.2026 ರವರೆಗೆ ವಿಸ್ತರಿಸಿದೆ.**

ವ್ಯವಸ್ಥಾಪಕ ನಿರ್ದೇಶಕರು

**MANAGING DIRECTOR**
Karnataka State Co-operative
Consumers Federation Ltd.
Chamarajpet, Bangalore-560 018

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಗುರುವಾರ, ೨೯, ಜನವರಿ, ೨೦೨೬ ( ಮಾಘ , ೦೯, ಶಕವರ್ಷ, ೧೯೪೭)<br>BENGALURU, THURSDAY, 29, JANUARY, 2026 ( MAGHA , 09, SHAKAVARSHA, 1947) | ನಂ. ೧೨೦<br>No. 120 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ ಸಡಿಲಿಸುವ ಕುರಿತು.

**ಓದಲಾಗಿದೆ:** 1.ದಿನಾಂಕ 06.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 249 ಸೇನೆನಿ 2025.

2. ದಿನಾಂಕ 29.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025,

*********

**ಪ್ರಸ್ತಾವನೆ:**

1. ಮೇಲೆ (2) ರಲ್ಲಿ ಓದಲಾದ ದಿನಾಂಕ:29.09.2025ರ ಆದೇಶದಲ್ಲಿ ದಿನಾಂಕ: 06.09.2025ರ ಆದೇಶವನ್ನು ಹಿಂಪಡೆದು, ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

2. ನಂತರದಲ್ಲಿ ಹಲವಾರು ಉದ್ಯೋಗಾಕಾಂಕ್ಷಿಗಳು, ಜನಪ್ರತಿನಿದಿಗಳು ಮತ್ತು ಸಂಘ ಸಂಸ್ಥೆಗಳು ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡುವಂತೆ ಕೋರಿರುತ್ತಾರೆ. ಸದರಿ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025**

**ಬೆಂಗಳೂರು, ದಿನಾಂಕ:29.01.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೇಲೆ (2)ರಲ್ಲಿ ಓದಲಾದ ದಿನಾಂಕ: 29.09.2025ರ ಆದೇಶವನ್ನು ಹಿಂಪಡೆದು, ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಆಶಾಕುಮಾರಿ ಎ ಜೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH